ಡಾ: ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು) :-

ಅ) ಹಾಸನ, ಮಂಡ್ಯ ಮತ್ತು ಬೆಳಗಾಂ.

ಆ) 300

ಇ) 2007-08ನೇ ಸಾಲಿನಲ್ಲಿ ಶಿವಮೊಗ್ಗ, ಬೀದರ್ ಮತ್ತು ರಾಯಚೂರುಗಳಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭ ಮಾಡಿ. ಪ್ರತಿ ಕಾಲೇಜಿಗೆ 100 ಸೀಟುಗಳಂತೆ ಪ್ರವೇಶ ನಿಗದಿಪಡಿಸಿ ಭಾರತೀಯ ವೈದ್ಯಕೀಯ ಪರಿಷತ್ತಿನ ಶಿಫಾರಸ್ಸಿನ ಮೇರೆಗೆ ಕೇಂದ್ರ ಸರ್ಕಾರದವರು ದಿನಾಂಕ: 13-07-2007ರಂದು ಅನುಮತಿ ನೀಡಿರುತ್ತಾರೆ. ಅದರಂತೆ ಈ ವೈದ್ಯಕೀಯ ಕಾಲೇಜುಗಳನ್ನು ಈ ವರ್ಷ ಪ್ರಾರಂಭಿಸಲಾಗುವುದು.

683 (1012) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) :- ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಮೇಲ್ದರ್ಜೆಗೇರಿಸಿರುವ ಬಾಗೇಪಲ್ಲಿ ಮತ್ತು ಗುಡಿಬಂಡೆ ಸರ್ಕಾರಿ ಆಸ್ಪತ್ರೆಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಈ ಆಸ್ಪತ್ರೆಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :-

ಅ) 2006-07ನೇ ಸಾಲಿನಲ್ಲಿ ಈ ಆಸ್ಪತ್ರೆಗಳನ್ನು 100 ಹಾಸಿಗೆಗಳ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸಿರುವುದರಿಂದ 2007-08ನೇ ಸಾಲಿಗೆ ಅಗತ್ಯವಾದ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕಾಗಿರುತ್ತದೆ.

ಆ) ಇದಕ್ಕೆ ಕಟ್ಟಡದ ಕಾಮಗಾರಿಯನ್ನು 2007-08 ನೇ ಸಾಲಿನಲ್ಲಿ ಕೈಗೊಳ್ಳಲು ಕ್ರಮ ವಹಿಸಲಾಗುತ್ತಿದೆ. ಇದಕ್ಕೆ ಅಗತ್ಯವಾಗಿರುವ ಸಿಬ್ಬಂದಿಗಳನ್ನು ಹಾಗೂ ಉಪಕರಣಗಳನ್ನು ಕಟ್ಟಡ ಕಾಮಗಾರಿ ಮುಗಿದ ನಂತರ ಪೂರೈಸಲು ಕ್ರಮ ಕೈಗೊಳ್ಳಲಾಗುವುದು.

684 (1013) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) :- ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಬಾಗೇಪಲ್ಲಿಯ ಸರ್ಕಾರಿ ಐಟಿಐ ಗೆ ಸ್ವಂತ ಕಟ್ಟಡ ಇಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಸದರಿ ಸಂಸ್ಥೆಗೆ ಸ್ವಂತ ಕಟ್ಟಡ ನಿರ್ಮಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು) :–

ಅ) ಹೌದು.

ಆ) ಹೌದು.

ಇ) ಅನುದಾನ ಲಭ್ಯತೆ ಆಧರಿಸಿ ಸ್ವಂತ ಕಟ್ಟಡ ನಿರ್ಮಿಸುವ ಬಗ್ಗೆ ಪರಿಶೀಲಿಸಲಾಗುವುದು.

685 (924) ಶ್ರೀ ಸುನಿಲ್ ಕುಮಾರ್. ವಿ (ಕಾರ್ಕಳ) :– ವೈದ್ಯಕೀಯ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ರಾಜ್ಯದಲ್ಲಿರುವ ನರ್ಸಿಂಗ್ ಶಾಲೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ;

ಆ) ಇವುಗಳಲ್ಲಿ ಎಷ್ಟು ಶಾಲೆಗಳು ಅನಧಿಕೃತ ಎಂದು ರಾಜ್ಯ ಹೈಕೋರ್ಟ್ ತೀರ್ಪು ನೀಡಿದೆ ; (ಕಾಲೇಜುಗಳ ವಿವರ ನೀಡುವುದು)

ಇ) ಅನಧಿಕೃತ ಶಾಲೆಗಳು ಎಂದು ತೀರ್ಪು ನೀಡಲು ಕಾರಣವೇನು ; (ವಿವರ ನೀಡುವುದು)

ಈ) ಈ ಶಾಲೆಗಳು ಪುನಃ 2007–08ನೇ ಸಾಲಿನಲ್ಲಿ ವಿದ್ಯಾರ್ಥಿಗಳನ್ನು ಸೇರಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಉ) ಬಂದಿದ್ದಲ್ಲಿ, ಈ ರೀತಿ ಸೇರಿಸಿಕೊಳ್ಳುತ್ತಿರುವ ಯಾವ ಯಾವ ಶಾಲೆಗಳ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿದೆ ;

ಊ) ಈ ಶಾಲೆಗಳನ್ನು ಸಕ್ರಮಗೊಳಿಸಲು ಸರ್ಕಾರ ಪರಿಹಾರೋಪಾಯವನ್ನು ರೂಪಿಸಿದೆಯೇ ; (ವಿವರ ನೀಡುವುದು)

ಶ್ರೀ ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು) :–

ಅ) 671 (ಪಟ್ಟಿಯನ್ನು ಲಗತ್ತಿಸಿದೆ).

ಆ) ಇಲ್ಲಿಯವರೆಗೆ ಉಚ್ಚ ನ್ಯಾಯಾಲಯ ಯಾವುದೇ ನರ್ಸಿಂಗ್ ಶಾಲೆಯನ್ನು ಅನಧಿಕೃತ ಎಂದು ತೀರ್ಪು ನೀಡಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಊ) ಉದ್ಭವಿಸುವುದಿಲ್ಲ.